# <u>ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯದ ನಡವಳಿಗಳು</u>

**ವಿಷಯ :** ಶ್ರೀ ಮೋಹನ ಹೆಚ್.ಆರ್, ಪಂಚಾಯತಿ ಅಭಿವೃದ್ಧಿ ಅಧಿಕಾರಿ ಇವರ ಅಮಾನತ್ತನ್ನು ತೆರವುಗೊಳಿಸಿ, ಸೇವೆಗೆ ಪುನರ್ ಸ್ಥಾಪಿಸುವ ಬಗ್ಗೆ-ಆದೇಶ.

**ಉಲ್ಲೇಖ :**
1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತಿ, ಹಾಸನ ಇವರ ಆದೇಶ ಸಂಖ್ಯೆ: ಜಿಪಂಹಾ/ಆಸಿ(2)/ಪಿಡಿಒ/ಶಿಸ್ತುಕ್ರಮ/37/2023-24, ದಿನಾಂಕ: 11.08.2023.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತಿ ಹಾಸನ ಇವರ ಪತ್ರ ಸಂಖ್ಯೆ: ಜಿಪಂಹಾ/ಆಸಿ(2)/ಪಿಡಿಒ.ಶಿಸ್ತುಕ್ರಮ/37/2023-24, ದಿನಾಂಕ: 16.11.2023
3. ಮಾನ್ಯ ಕರ್ನಾಟಕ ರಾಜ್ಯ ಆಡಳಿತ ನ್ಯಾಯ ಮಂಡಳಿ, ಬೆಂಗಳೂರು ಅರ್ಜಿ ಸಂಖ್ಯೆ: 492/2024 ರ ಮಧ್ಯಂತರ ಆದೇಶ ದಿನಾಂಕ: 29.01.2024.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತಿ ಹಾಸನ ಇವರ ಪತ್ರ ಸಂಖ್ಯೆ: ಜಿಪಂಹಾ/ಆಸಿ(2)/ಪಂಅಅ/ಶಿಸ್ತುಕ್ರಮ/37/2023-24, ದಿನಾಂಕ: 12.02.2024
5. ಶ್ರೀ ಮೋಹನ್ ಹೆಚ್.ಆರ್, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಹಾಸನ ಜಿಲ್ಲೆ ಇವರ ಮನವಿ ದಿನಾಂಕ: 19.02.2024.

*****

**ಪ್ರಸ್ತಾವನೆ:**

ಮೇಲೆ ಓದಲಾದ (1) ರಲ್ಲಿ ಶ್ರೀ ಮೋಹನ ಹೆಚ್.ಆರ್, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಆನೆಮಹಲ್ ಗ್ರಾಮ ಪಂಚಾಯತಿ, ಸಕಲೇಶಪುರ ತಾಲ್ಲೂಕು, ಹಾಸನ ಜಿಲ್ಲೆ ಇವರು ಈ ಹಿಂದೆ ಹಾಸನ ತಾಲ್ಲೂಕು ತಟ್ಟೆಕೆರೆ ಗ್ರಾಮ ಪಂಚಾಯತಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಅವಧಿಯಲ್ಲಿ ಲಂಚ ಸ್ವೀಕರಿಸುವ ಸಂದರ್ಭದಲ್ಲಿ ಲೋಕಾಯುಕ್ತ ಟ್ರ್ಯಾಪ್ ಆಗಿ ದಸ್ತಗಿರಿ ಮಾಡಿದ್ದು, ಸದರಿ ನೌಕರರನ್ನು ದಿನಾಂಕ: 24.08.2023 ರವರೆಗೆ ನ್ಯಾಯಾಂಗ ಬಂಧನಕ್ಕೆ ಆದೇಶಿಸಿದ ಹಿನ್ನಲೆಯಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಹಾಸನ ಇವರು ಸದರಿ ನೌಕರರನ್ನು ಕರ್ನಾಟಕ ನಾಗರಿಕ ಸೇವಾ (ವ.ನಿ.ಮೇ) ನಿಯಮಗಳು 1957, ರ ನಿಯಮ 10(1)(ಎ) ರನ್ವಯ ಸೇವೆಯಿಂದ ಅಮಾನತ್ತುಪಡಿಸಿರುತ್ತಾರೆ.

ಮೇಲೆ ಓದಲಾದ (2) ರಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ ಹಾಸನ ಇವರು ಸದರಿ ನೌಕರರ ಅಮಾನತ್ತು ಆಗಿ 03 ತಿಂಗಳು ಕಳೆದಿರುವುದರಿಂದ, ಸದರಿ ನೌಕರರ ಸೇವೆಯನ್ನು ಪುನರ್ ಸ್ಥಾಪಿಸುವ ಸಂಬಂಧ ಅಗತ್ಯ ದಾಖಲೆಗಳೊಂದಿಗೆ ಆಯುಕ್ತಾಲಯಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಮೇಲೆ ಓದಲಾದ (3) ರಲ್ಲಿ, ಸದರಿ ನೌಕರರು ಮೇಲೆ ಓದಲಾದ (1) ರ ಅಮಾನತ್ತು ಆದೇಶವನ್ನು ಪ್ರಶ್ನಿಸಿ ಮಾನ್ಯ ಕರ್ನಾಟಕ ರಾಜ್ಯ ಆಡಳಿತ ನ್ಯಾಯ ಮಂಡಳಿ, ಬೆಂಗಳೂರು ಇಲ್ಲಿ ಅರ್ಜಿ ಸಂಖ್ಯೆ: 492/2024 ರ ಮೂಲಕ ಪ್ರಕರಣ ದಾಖಲಿಸಿದ್ದು, ಸದರಿ ನ್ಯಾಯಾಲಯವು ದಿನಾಂಕ: 29.01.2024 ರಂದು ಅಮಾನತ್ತು ಆದೇಶಕ್ಕೆ ತಡೆಯಾಜ್ಞೆ ನೀಡಿ, ಮಧ್ಯಂತರ ಆದೇಶ ಹೊರಡಿಸಲಾಗಿರುತ್ತದೆ.

ಮೇಲೆ ಓದಲಾದ (4) ರಲ್ಲಿ, ಮಾನ್ಯ ಕರ್ನಾಟಕ ರಾಜ್ಯ ಆಡಳಿತ ನ್ಯಾಯ ಮಂಡಳಿಯಿಂದ ಅಮಾನತ್ತು ಆದೇಶಕ್ಕೆ ತಡೆಯಾಜ್ಞೆ ನೀಡಿರುವುದರಿಂದ ಹಾಗೂ ಶ್ರೀ ವೇಣುಗೋಪಾಲ್ ಬಿ.ಹೆಚ್, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಜಿಲ್ಲಾ ಪಂಚಾಯತಿ ಮೈಸೂರು ಇವರನ್ನು ಆನೆಮಹಲ್ ಗ್ರಾಮ ಪಂಚಾಯತಿ, ಸಕಲೇಶಪುರ ತಾಲ್ಲೂಕು ಇಲ್ಲಿಗೆ ವರ್ಗಾವಣೆ ಮಾಡಿದ್ದು, ಸದರಿ ನೌಕರರು ದಿನಾಂಕ: 17.01.2024 ರಂದು ಕರ್ತವ್ಯಕ್ಕೆ ವರದಿ ಕೊಂಡಿರುವುದರಿಂದ, ಶ್ರೀ ಮೋಹನ ಹೆಚ್.ಆರ್, ಪಂಚಾಯತಿ

ಅಭಿವೃದ್ಧಿ ಅಧಿಕಾರಿ ಇವರನ್ನು ದಿನಾಂಕ: 17.01.2024 ರಿಂದ ಅನ್ವಯವಾಗುವಂತೆ ಖಾಲಿ ಇರುವ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಹುದ್ದೆಗೆ ಲೀನ್ ಅನ್ನು ಬದಲಾವಣೆ ಮಾಡುವ ಬಗ್ಗೆ ಕೋರಿರುತ್ತಾರೆ.

ಶ್ರೀ ಮೋಹನ ಹೆಚ್.ಆರ್, ಪಂಚಾಯತಿ ಅಭಿವೃದ್ಧಿ ಅಧಿಕಾರಿ ಇವರು ಮೇಲೆ ಓದಲಾದ (5) ರಲ್ಲಿ ಆಯುಕ್ತಾಲಯಕ್ಕೆ ಮನವಿ ಸಲ್ಲಿಸಿ, ಮಾನ್ಯ ಕರ್ನಾಟಕ ರಾಜ್ಯ ಆಡಳಿತ ನ್ಯಾಯ ಮಂಡಳಿಯು ನೀಡಿರುವ ತಡೆಯಾಜ್ಞೆಯನ್ನು ಉಲ್ಲೇಖಿಸಿ ಆನೆಮಹಲ್ ಗ್ರಾಮ ಪಂಚಾಯತಿ ಹೊರತುಪಡಿಸಿ ಬೇರೆ ಗ್ರಾಮ ಪಂಚಾಯತಿಗೆ ಸ್ಥಳ ನಿಯುಕ್ತಿಗೊಳಿಸಿ ಕರ್ತವ್ಯ ನಿರ್ವಹಿಸಲು ಅವಕಾಶ ಮಾಡಿಕೊಡುವಂತೆ ಕೋರಿರುತ್ತಾರೆ.

ಸರ್ಕಾರದ ಸುತ್ತೋಲೆ ಸಂಖ್ಯೆ: ಸಿಆಸುಇ 2 ಸೇಇವಿ 2003, ದಿನಾಂಕ: 06.02.2003 ರ ಅನುಸಾರ ಅಮಾನತ್ತು ಪ್ರಕರಣಗಳನ್ನು ನಿಯಮಿತವಾಗಿ ಮೂರು ತಿಂಗಳಿಗೊಮ್ಮೆ ಪರಿಶೀಲಿಸಿ, ನಿರ್ಣಯ ಕೈಗೊಳ್ಳಲು ಅಡಳಿತಾತ್ಮಕ ಇಲಾಖೆಗೆ ಸಲಹಿಸಲಾಗಿದೆ. ಆಡಳಿತಾತ್ಮಕ ಹಿತದೃಷ್ಟಿಯಿಂದ, ಶ್ರೀ ಮೋಹನ ಹೆಚ್.ಆರ್, ಪಂಚಾಯತಿ ಅಭಿವೃದ್ಧಿ ಅಧಿಕಾರಿ ಇವರನ್ನು ಈಗಾಗಲೇ ಸೇವೆಯಿಂದ ಅಮಾನತ್ತುಪಡಿಸಿ ಆರು ತಿಂಗಳಿಗೂ ಹೆಚ್ಚಿನ ಅವಧಿ ಆಗಿರುವುದರಿಂದ, ಅವರ ಅಮಾನತ್ತನ್ನು ತೆರವುಗೊಳಿಸಿ ಸೇವೆಗೆ ಪುನರ್ ಸ್ಥಾಪಿಸಿ ಅವರನ್ನು ಸ್ಥಳನಿಯುಕ್ತಿಗೊಳಿಸಲು ನಿರ್ಧರಿಸಿದೆ. ಆದ್ದರಿಂದ ಈ ಆದೇಶ:

**ಆದೇಶ ಸಂಖ್ಯೆ: KPRC-ADM2/209/2023, ಬೆಂಗಳೂರು, ದಿನಾಂಕ: 27.02.2024**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ಮೋಹನ ಹೆಚ್.ಆರ್, ಪಂಚಾಯತಿ ಅಭಿವೃದ್ಧಿ ಅಧಿಕಾರಿ ಇವರ ವಿರುದ್ಧ ಕರ್ನಾಟಕ ಲೋಕಾಯುಕ್ತ, ಹಾಸನ ವಿಭಾಗ, ಹಾಸನ ಇಲ್ಲಿ ದಾಖಲಾದ ಮೊಕದ್ದಮೆ ಸಂಖ್ಯೆ: 03/2023 ಗೆ ಸಂಬಂಧಿಸಿದಂತೆ ಕರ್ನಾಟಕ ಲೋಕಾಯುಕ್ತವು ಕೈಗೊಳ್ಳುವ ಕ್ರಮವನ್ನು ಬಾಕಿ ಇರಿಸಿ, ಸದರಿಯವರ ಅಮಾನತ್ತನ್ನು ತಕ್ಷಣದಿಂದ ಜಾರಿಗೆ ಬರುವಂತೆ ತೆರವುಗೊಳಿಸಿ ಸೇವೆಗೆ ಪುನರ್ ಸ್ಥಾಪಿಸಿ, ಸದರಿಯವರನ್ನು ದಿನಾಂಕ: 17.01.2024 ರಿಂದ ಅನ್ವಯವಾಗುವಂತೆ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಬೇಳೂರು ಗ್ರಾಮ ಪಂಚಾಯತಿ, ಸೋಮವಾರಪೇಟೆ ತಾಲ್ಲೂಕು, ಕೊಡಗು ಜಿಲ್ಲೆ ಇಲ್ಲಿನ ಖಾಲಿ ಹುದ್ದೆಗೆ ಸ್ಥಳನಿಯುಕ್ತಿಗೊಳಿಸಿ ಆದೇಶಿಸಿದೆ.

**(ಪ್ರಿಯಾಂಕ ಮೇರಿ ಫ್ರಾನ್ಸಿಸ್)**
ಆಯುಕ್ತರು
ಹಾಗೂ ನೇಮಕಾತಿ ಮತ್ತು ಶಿಸ್ತು ಪ್ರಾಧಿಕಾರಿ
ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

**ಇವರಿಗೆ:**

1. ಪೊಲೀಸ್ ಮಹಾನಿರೀಕ್ಷಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತಿ ಹಾಸನ ಮತ್ತು ಕೊಡಗು.
3. ಪೊಲೀಸ್ ಅಧೀಕ್ಷಕರು, ಕರ್ನಾಟಕ ಲೋಕಾಯುಕ್ತ, ಹಾಸನ ವಿಭಾಗ, ಹಾಸನ.

**ಪ್ರತಿಯನ್ನು:**

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಕಾಸಸೌಧ, ಬೆಂಗಳೂರು.

2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಗ್ರಾಅಪಂರಾಜ್ ಇಲಾಖೆ ರವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು (ಪಂ.ರಾಜ್), ಗ್ರಾಅಪಂರಾಜ್ ಇಲಾಖೆ ರವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
4. ಸಂಬಂಧಿಸಿದ ನೌಕರರಿಗೆ.
5. ಆಯುಕ್ತಾಲಯದ ವೆಬ್ ಸೈಟ್ /ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.